ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಕಾರವಾರ ಜಿಲ್ಲೆಯಲ್ಲಿ ಸರಗಳ್ಳತನ ಮತ್ತು ದರೋಡೆ ಕೃತ್ಯಗಳು ನಡೆಯುತ್ತಿರುವ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

454 (631) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯಲ್ಲಿ ಸರ ಕಳ್ಳತನ, ದರೋಡೆ ಮುಂತಾದ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಕಳೆದ 2 ವರ್ಷದಿಂದ ಸದರಿ ವಿಷಯದಲ್ಲಿ ದಾಖಲಾಗಿರುವ ದೂರುಗಳು ಎಷ್ಟು; ಆ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳು ಎಷ್ಟು; ಬಾಕಿ ಇರುವ ಪ್ರಕರಣಗಳನ್ನು ಶೀಘ್ರದಲ್ಲಿ ಪತ್ತೆ ಹಚ್ಚಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳ್ಳರಿಂದ ವಶಪಡಿಸಿಕೊಂಡಿರುವ ಆಭರಣಗಳು ಹಾಗೂ ಇತರೇ ವಸ್ತುಗಳ ಮೌಲ್ಯ ಎಷ್ಟು; ಅವುಗಳನ್ನು ಸಂಬಂಧಪಟ್ಟವರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ? (ತಾಲ್ಲೂಕುವಾರು /ಜಿಲ್ಲಾವಾರು ಸವಿಸ್ತಾರ ವಿವರ ಎಫ್. ಐ. ಆರ್. ನಲ್ಲಿ ನಮೂದಿಸಿದಂತೆ ನೀಡುವುದು)